**9 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,**
**ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.**

**ಎಸ್.ಸಿ.ನಂ.343/2019**

**(ಚಾ.ಸಾ.20/ಪ್ರಾ.ಸಾ.14)**

ತಾಃ 09.12.2025 ರಂದು ಸಾಕ್ಷಿಗೆ ಪ್ರಮಾಣ ವಚನ ಮಾಡಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು: | ಚಂದ್ರ |
| ತಂದೆಯ ಹೆಸರು | ತಮ್ಮಣ್ಣಪ್ಪ |
| ವಯಸ್ಸು | 48 ವರ್ಷ |
| ಉದ್ಯೋಗ | ಕೂಲಿ ಕೆಲಸ |
| ವಾಸ ಸ್ಥಳ | ಪರಶಿವನಹಳ್ಳಿ, ಬಿಡದಿ ಹೋಬಳಿ |

**<u>ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ</u>**

ನ್ಯಾಯಾಲಯದ ಮುಂದೆ ಇರುವ ಆರೋಪಿಗಳನ್ನು ನಾನು ನೋಡಿರುವುದಿಲ್ಲ. ಈ ಪ್ರಕರಣದಲ್ಲಿ ಮೃತಪಟ್ಟ ಮಂಜುನಾಥರವರ ಮೃತದೇಹವನ್ನು ನಾನು ನೋಡಿಲ್ಲ. ನಾನು ಪೊಲೀಸರ ಕೋರಿಕೆಯ ಮೇರೆಗೆ ಕೊಳಚೆ ನೀರಿನಿಂದ ಮೃತದೇಹದ ಮೂಟೆಯನ್ನು ಎತ್ತಿ ಕೊಟ್ಟಿರುವುದಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ಮೃತ ಮಂಜುನಾಥ ಯಾವ ರೀತಿ ಮರಣ ಹೊಂದಿದ್ದಾನೆ ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಸರ್ಕಾರಿ ಅಭಿಯೋಜಕರು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಅನುಮತಿ ನೀಡಲಾಯಿತು.)

ಎಸ್.ಸಿ.ನಂ.343/2019
ಚಾ.ಸಾ.20/ಪ್ರಾ.ಸಾ.14

**ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ**

2. ನಾನು ಪೊಲೀಸರಿಗೆ ನೀಡಿದ ಹೇಳಿಕೆಯಲ್ಲಿ ದಿಃ31.08.2018 ರಂದು ಆರೋಪಿಗಳು ಮಂಜುನಾಥನನ್ನು ಕೊಲೆ ಮಾಡಿ ಗೋಣಿ ಚೀಲ ಮತ್ತು ಪ್ಲಾಸ್ಟಿಕ್ ಚೀಲದಲ್ಲಿ ಮೃತದೇಹವನ್ನು ತುಂಬಿ ಮೂಟೆ ಕಟ್ಟಿ ವೃಷಭಾವತಿ ಕೊಳಚೆ ನೀರಿನಲ್ಲಿ ಬೀಸಾಡಿ ಹೋಗಿರುವುದಾಗಿ ಪೊಲೀಸರ ಮುಂದೆ ಹೇಳಿಕೆ ನೀಡಿದ್ದು ಆರೋಪಿಗಳು ತೋರಿಸಿದ ಸ್ಥಳದಲ್ಲಿ ನಾನು ಮತ್ತು ಚಾಸಾ.19 ರವರು ಮೂಟೆಯನ್ನು ಎಳೆದುಕೊಂಡು ಬಂದು ಬಿಚ್ಚಿ ನೋಡಿದಾಗ ಅದರಲ್ಲಿ ಮಂಜುನಾಥನ ಮೃತದೇಹ ಇರುತ್ತದೆ ಎಂದು ಈಗ ಓದಿ ಹೇಳಿದಂತೆ ಪೊಲೀಸರಿಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿ.ಪಿ.19 ಎಂದು ಗುರುತಿಸಲಾಯಿತು. ನಾನು ಪೊಲೀಸರಿಗೆ ನಿ.ಪಿ.19 ರಂತೆ ಹೇಳಿಕೆ ನೀಡಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿದಿರುತ್ತೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃಏನು ಇಲ್ಲ.**

(ಮೇಲ್ಕಂಡ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿದೆ.)

ಓ. ಹೇ. ಕೇ. ಸ. ಸಹಿ ಮಾಡಿದ್ದಾರೆ.

(ವಿಜಯ್ ಕುಮಾರ್)
9 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.